ವಿಷಯ :- ಲಂಬಾಣಿ ತಾಂಡಾ, ಗೊಲ್ಲರ ಹಟ್ಟಿ ಮುಂತಾದವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 874 (1532)

ಶ್ರೀಮತಿ ಬಿ. ಟಿ. ಲಲಿತಾ ನಾಯಕ್ (ದೇವದುರ್ಗ) :- ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

(ಅ) ಲಂಬಾಣಿ ತಾಂಡಾ, ಗೊಲ್ಲರ ಹಟ್ಟಿ ಮುಂತಾದವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡುವ ವಿಷಯ ಇತ್ಯರ್ಥವಾಗದೇ ಇರುವುದು ನಿಜವಲ್ಲವೇ ; ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ;

ಆ) ಹಾಗಿದ್ದಲ್ಲಿ, ಎಷ್ಟು ದಿವಸಗಳಲ್ಲಿ ಲಂಬಾಣಿ ತಾಂಡಗಳನ್ನು ಕಂದಾಯ ಗ್ರಾಮಗಳಾಗಿ ಮಾಡಲಾಗುವುದು?

ಶ್ರೀ ರಮೇಶ್ ಸಿ. ಜಿಗಜಣಗಿ (ಕಂದಾಯ ಸಚಿವರು) :-

(ಅ) ಇಲ್ಲ.

500 ಕ್ಕಿಂತ ಹೆಚ್ಚಿನ ಜನಸಂಖ್ಯೆ ಅಥವಾ 100 ಕ್ಕಿಂತ ಹೆಚ್ಚು ಕುಟುಂಬಗಳನ್ನು ಹೊಂದಿರುವ ತಾಂಡ, ಹ್ಯಾಮಲೆಟ್, ಹಟ್ಟಿಗಳನ್ನು ಮತ್ತು ಇತರೆ ಮಜರೆ ಗ್ರಾಮ ಗಳನ್ನು ಕಂದಾಯ ಗ್ರಾಮಗಳೆಂದು ಪರಿವರ್ತಿಸಲು ಸರ್ಕಾರವು ಅಳತೆಗೋಲನ್ನು ಹಾಕಿ ಕೊಂಡಿದೆ. ಈ ಮೇಲೆಗೆ ಈಗಾಗಲೇ 415 ಅರ್ಹ ತಾಂಡ ಹ್ಯಾಮಲೆಟ್‌ಗಳನ್ನು ಗುರ್ತಿಸಿ, ಅವುಗಳ ಪ್ರಾಥಮಿಕ ಅಧಿಸೂಚನೆ ಹೊರಡಿಸಿದ್ದು, ಅವುಗಳಲ್ಲಿ 270 ಅರ್ಹ ತಾಂಡ : ಹ್ಯಾಮಲೆಟ್‌ಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಿ ಅಂತಿಮ ಆದೇಶ ಹೊರಡಿಸಿದೆ. ಉಳಿದ ತಾಂಡ : ಹ್ಯಾಮ್‌ಲೆಟ್‌ಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಿ ಅಂತಿಮ ಅಧಿಸೂಚನೆ ಹೊರಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇದಲ್ಲದೇ ರಾಜ್ಯದಲ್ಲಿ ಇನ್ನೂ ಬಾಕಿ ಉಳಿದಿರುವ ಅರ್ಹ ತಾಂಡ : ಹ್ಯಾಮಲೆಟ್: ಮಜರೆ ಗ್ರಾಮಗಳ ಜೊತೆಗೆ ಇತರೆ ಹಟ್ಟಿಗಳನ್ನು ಸಹಾ ಗುರ್ತಿಸಿ ಸೂಕ್ತ ಪ್ರಸ್ತಾವನೆ ಸಲ್ಲಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳನ್ನು ಕೋರಲಾಗಿದೆ.

(ಆ) ಮೇಲೆನೀಡಿರುವ ಉತ್ತರದಿಂದ ಇದು ಉದ್ಭವಿಸುವುದಿಲ್ಲ.